## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಅಶೋಕ ತಲವಾಡೆ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ-1ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ GLB-36 /2010/ARE-5 ದಿನಾಂಕ. 21.10.2016.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ GLB-36 /2010/ARE-5 ದಿನಾಂಕ. 20.10.2016.

-----

**ಪ್ರಸ್ತಾವನೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 21.10.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಸೈಯದ ಪಟೇಲ್ ತಂದೆ ಅಕ್ಬರ್ ಪಟೇಲ್ ಸಾ//ಯಳವಾರ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರು 2004-05ನೇ ಸಾಲಿನ ಜಲ ನಿರ್ಮಲ ಯೋಜನೆಯ ಕಾಮಗಾರಿಯನ್ನು ಕಳಪೆಯಾಗಿ ನಿರ್ವಹಿಸಿ ಈ ಕೆಳಕಂಡವರು ಹಣ ದುರುಪಯೋಗಪಡಿಸಿಕೊಂಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1) ಶ್ರೀ ಮನ್ಮಥ, ಕಾರ್ಯದರ್ಶಿ, ಯಳವಾರ ಗ್ರಾಮ ಪಂಚಾಯತಿ.
2) ಶ್ರೀ ಮುಳಗಯ್ಯ, ಕಿ.ಇಂ., ಜಲಾನಯನ ಅಭಿವೃದ್ಧಿ ಇಲಾಖೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರಿಂದ ಪಡೆಯಲಾಗಿರುವ ವರದಿಯಲ್ಲಿ ಸದರಿ ಕಾಮಗಾರಿಗೆ ರೂ. 30.21.355/-ಗಳನ್ನು ವೆಚ್ಚ ಮಾಡಿದ್ದು, 7 ಸ್ಟ್ಯಾಂಡ್ ಪೋಸ್ಟ್‌ಗೆ ಕುಡಿಯುವ ನೀರನ್ನು ಸರಬರಾಜು ಮಾಡಿದ್ದು ಒಂದು ಸ್ಟ್ಯಾಂಡ್ ಪೋಸ್ಟ್‌ಗೆ ನೀರನ್ನು ಸರಬರಾಜು

ಮಾಡಿಲ್ಲವೆಂದು ಹಾಗೂ ಸದರಿ ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನಗೊಳಿಸಿಲ್ಲವೆಂದು ವರದಿ ಮಾಡಿರುತ್ತಾರೆಂದು ತಿಳಿಸಿರುತ್ತಾರೆ.

ಅಲ್ಲದೆ, ಸದರಿ ದೂರಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರು ಪ್ರಕರಣಕ್ಕೆ ಸಂಬಂಧಪಟ್ಟ ಕೆಲವು ದಾಖಲೆಗಳನ್ನು ಒದಗಿಸಿದ್ದು, ಸದರಿ ಕಾಮಗಾರಿಯ ಬಿಲ್ಲುಗಳನ್ನು ಗ್ರಾಮ ಪಂಚಾಯತಿ ಯಳವಾರ ವತಿಯಿಂದ ಗುತ್ತಿಗೆದಾರರಿಗೆ ಪಾವತಿಸಿದ್ದು ಹಾಗೂ ಸದರಿ ಕಾಮಗಾರಿಗೆ ಸಂಬಂಧಪಟ್ಟ ದಾಖಲೆಗಳನ್ನು ದಿನಾಂಕ 31.01.2009ರಂದು ಗ್ರಾಮ ಪಂಚಾಯತಿಯ ನೀರು ಮತ್ತು ನೈರ್ಮಲ್ಯ ಸಮಿತಿಗೆ ಹಸ್ತಾಂತರಿಸಲಾಗಿರುತ್ತದೆಂದು, ಸದರಿ ಕಾಮಗಾರಿಯ ಪ್ರಾರಂಭದಿಂದ ಮುಕ್ತಾಯಗೊಂಡ ಅವಧಿಯಲ್ಲಿ ಈ ಕೆಳಕಂಡ ಅಧಿಕಾರಿ/ನೌಕರರುಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿಯಲ್ಲಿ ಕಾರ್ಯನಿರ್ವಹಿಸಿರುತ್ತಾರೆಂದು ವರದಿ ಸಲ್ಲಿಸಿರುತ್ತಾರೆಂದು ತಿಳಿಸಿರುತ್ತಾರೆ:-

1. ಶ್ರೀ ನಂದಕುಮಾರ್ ಕುಲಕರ್ಣಿ, ಸ.ಕಾ.ಇಂ. ಪ್ರಸ್ತುತ ಪಂ.ರಾ.ಇಂ. ಉಪವಿಭಾಗ, ಚಿತ್ತಾಪೂರ.
2. ಶ್ರೀ ಅಶೋಕ ತಲವಾಡೆ, ಸ.ಕಾ.ಇಂ., ಪ್ರಸ್ತುತ ಸ.ಕಾ.ಇಂ., ಪಂ.ರಾ.ಇಂ. ಉಪವಿಭಾಗ, ಬಸವಕಲ್ಯಾಣ
3. ಶ್ರೀ ಡಿ.ಜಿ.ಕಲ್ಲೂರಮಠ, ಸ.ಇಂ., ಪ್ರಸ್ತುತ ಕೆ.ಬಿಜೆ.ಎನ್.ಎಲ್, ಉಪವಿಭಾಗ, ರಾಮಪುರ
4. ಶ್ರೀ ಪ್ರಭುಲಿಂಗ, ಕಿ.ಇಂ., ಪ್ರಸ್ತುತ ಕಿ.ಇಂ., ಪಂ.ರಾ.ಇಂ. ಉಪವಿಭಾಗ, ಚಿಂಚೋಳಿ
5. ಶ್ರೀ ಲಕ್ಷ್ಮಣ ಸಾಹು, ಕಿ.ಇಂ., ಎ.ಪಿ.ಎಂ.ಸಿ., ಕಲಬುರಗಿ,
6. ಶ್ರೀ ಮನ್ಮಥ ಶಿವರಾಯ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಯಳವಾರ (ಹಾಲಿ ನಿವೃತ್ತ).

ಮೇಲ್ಕಂಡ ಆಪಾದಿತರುಗಳ ಪೈಕಿ ಕ್ರಮ ಸಂಖ್ಯೆ 6ರಲ್ಲಿರುವ ಶ್ರೀ ಮನ್ಮಥ ಶಿವರಾಯ, ನಿವೃತ್ತ ಕಾರ್ಯದರ್ಶಿರವರನ್ನು ಬಿಟ್ಟು ಇನ್ನುಳಿದವರಿಂದ ಲೋಕಾಯುಕ್ತ ಕಚೇರಿಯು ಸದರಿ ದೂರಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳನ್ನು ಕೇಳಲಾಗಿದ್ದು, ಇದಕ್ಕೆದುರಾಗಿ ಶ್ರೀ ನಂದಕುಮಾರ ಕುಲಕರ್ಣಿ ಇವರು ದಿನಾಂಕ 31.05.2016ರಂದು ಸೇವೆಯಿಂದ ನಿವೃತ್ತರಾಗಿರುವುದಾಗಿಯೂ, ಶ್ರೀ ಅಶೋಕ ತಲವಾಡೆ ಇವರು ಸದರಿ ಕಾಮಗಾರಿಯನ್ನು ದಿನಾಂಕ 28.12.2006ರಂದು ಗುತ್ತಿಗೆದಾರರಿಗೆ ವಹಿಸಲಾಗಿತ್ತೆಂದು, ಸದರಿ ಕಾಮಗಾರಿಯನ್ನು ಸರಿಯಾಗಿ ನಿರ್ವಹಿಸಿರುವ ಬಗ್ಗೆ ಕಾರ್ಯಪಾಲಕ ಇಂಜಿನಿಯರ್ ರವರು ವರದಿ ನೀಡಿರುತ್ತಾರೆಂದು, ಶ್ರೀ ಶ್ರೀ ಡಿ. ಜಿ. ಕಲ್ಲೂರಮಠ ರವರು ತಮ್ಮ ಮೇಲಿನ ಆಪಾದನೆಗಳನ್ನು ನಿರಾಕರಿಸಿರುತ್ತಾರೆಂದು, ಶ್ರೀ ಪ್ರಭುಲಿಂಗ ರವರು ಸದರಿ ಕಾಮಗಾರಿಯನ್ನು ಗ್ರಾಮ ಪಂಚಾಯತಿಯ ಅಧ್ಯಕ್ಷರು, ಸದಸ್ಯರು ಮತ್ತು ಗ್ರಾಮಸ್ಥರು ಪರಿಶೀಲನೆ ನಡಸಿದ ನಂತರ ಗುತ್ತಿಗೆದಾರರಿಗೆ ದಿನಾಂಕ 20.11.2009ರಂದು ಬಿಲ್ಲುಗಳನ್ನು ಪಾವತಿಸಲಾಗಿದೆಯೆಂದೂ, ಶ್ರೀ ಲಕ್ಷ್ಮಣ ಸಾಹು ಇವರು ಸದರಿ ಉಪವಿಭಾಗದಲ್ಲಿ ತಾವು ಕೇವಲ 15 ದಿನಗಳ ಕಾಲ ಪ್ರಭಾರಿ ಕಿರಿಯ ಇಂಜಿನಿಯರ್‌ರಾಗಿ ಕಾರ್ಯನಿರ್ವಹಿಸಿರುವುದಾಗಿಯೂ, ಸದರಿ ಕಾಮಗಾರಿಯನ್ನು ತಮ್ಮ ಅವಧಿಯಲ್ಲಿ ಅನುಷ್ಠಾನಗೊಳಿಸಿರುವುದಿಲ್ಲವೆಂದು ಹೇಳಿಕೆ ಸಲ್ಲಿಸಿರುತ್ತಾರೆಂದು ತಿಳಿಸಿರುತ್ತಾರೆ.

ಮುಂದುವರೆದು, ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳು ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸಿರುವ ಬಗ್ಗೆ ಕಾಮಗಾರಿಯ ಅಂದಾಜು ಪಟ್ಟಿ, ಅಳತೆ ಪುಸ್ತಕ, ಸಾಮಗ್ರಿಗಳನ್ನು ಖರೀದಿಸಿರುವ ಹಾಗೂ ಬಿಲ್ಲುಗಳನ್ನು ಪಾವತಿಸಿರುವ ಬಗೆಗಿನ ದಾಖಲೆಗಳನ್ನು ಸಲ್ಲಿಸಿರುವುದಿಲ್ಲವೆಂದು, ಆಪಾದಿತ ನೌಕರರಾದ ಶ್ರೀ ಪ್ರಭುಲಿಂಗ, ಕಿರಿಯ ಇಂಜಿನಿಯರ್ ಇವರು ಕಲಬುರಗಿ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿರವರ ಮುಂದೆ ಸದರಿ ಕಾಮಗಾರಿಯನ್ನು ಸರಿಯಾಗಿ ಅನುಷ್ಟಾನಗೊಳಿಸಿಲ್ಲವೆಂದು ಒಪ್ಪಿಕೊಂಡಿರುತ್ತಾರೆಂದು ತಿಳಿಸಿರುತ್ತಾರೆ.

ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳ ಪೈಕಿ ಶ್ರೀ ಮನ್ಮಥ ಶಿವರಾಯ, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಯಳವಾರ ಮತ್ತು ಶ್ರೀ ನಂದಕುಮಾರ್ ಕುಲಕರ್ಣಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರುಗಳು ಸೇವೆಯಿಂದ ನಿವೃತ್ತರಾಗಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ, ಕಲಬುರಗಿ ರವರ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಆಪಾದಿತರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುವುದಿಲ್ಲವೆಂದು, ಪ್ರಕರಣದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಆಪಾದಿತರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ:-

1. ಶ್ರೀ ಅಶೋಕ ತಲವಾಡೆ ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ.
2. ಶ್ರೀ ಡಿ.ಜಿ.ಕಲ್ಲೂರಮಠ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ.
3. ಶ್ರೀ ಪ್ರಭುಲಿಂಗ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ ಆಪಾದಿತರು ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಯಳವಾರ ಗ್ರಾಮದ ಕುಡಿಯುವ ನೀರು ಯೋಜನೆಯ ಕಾಮಗಾರಿಯನ್ನು ಸಮರ್ಪಕವಾಗಿ ಅನುಷ್ಟಾನಗೊಳಿಸದೇ ಹಣ ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪದ ಬಗ್ಗೆ

ವಿವರವಾದ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡುಬರುತ್ತದೆ. ಆದ್ದರಿಂದ ಸದರಿ ಆಪಾದಿತರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 138 ಇಎನ್‌ಕ್ಯೂ 2016 ಬೆಂಗಳೂರು, ದಿನಾಂಕ. 01.12.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಅಶೋಕ ತಲವಾಡೆ ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ (ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ).
2. ಶ್ರೀ ಡಿ.ಜಿ.ಕಲ್ಲೂರಮಠ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ (ಪ್ರಸ್ತುತ ಸಹಾಯಕ ಇಂಜಿನಿಯರ್, ಕೆ.ಬಿ.ಜೆ.ಎನ್.ಎಲ್., ಉಪವಿಭಾಗ, ರಾಮಪುರ).
3. ಶ್ರೀ ಪ್ರಭುಲಿಂಗ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ (ಪ್ರಸ್ತುತ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಂಚೋಳಿ).

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.

7. ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಮುಖಾಂತರ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
11. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.